**ಕರ್ನಾಟಕ ಸರ್ಕಾರ**

# ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ

---

**ವಿಷಯ:** ಕೋವಿಡ್-19 ರೋಗ ತಡೆ ಹಾಗೂ ನಿಯಂತ್ರಣ ಕಾರ್ಯದ ನಿಮಿತ್ತ ಸಾರ್ವಜನಿಕ ಸ್ಥಳಗಳಲ್ಲಿ ಉಗುಳುವುದನ್ನು ನಿರ್ಬಂಧಿಸಿರುವ ಕುರಿತು.

**ಉಲ್ಲೇಖ:-** ಕೇಂದ್ರ ಗೃಹ ಮಂತ್ರಾಲಯದ ಆದೇಶ ಸಂಖ್ಯೆ 40-3/2020-ಡಿಎಂ(ಎ) ದಿ:15-4-2020.

****%****

**ಪ್ರಸ್ತಾವನೆ:-**

ಕೋವಿಡ್-19 ರೋಗ ತಡೆ ಹಾಗೂ ನಿಯಂತ್ರಣ ಕಾರ್ಯದ ನಿಮಿತ್ತ ದೇಶವ್ಯಾಪ್ತಿ ಲಾಕ್‌ಡೌನ್ ಮುಂದುವರೆಸಿದ್ದು, ಈ ಸಂದರ್ಭದಲ್ಲಿ ಕೈಗೊಳ್ಳಬೇಕಾಗಿರುವ ಕ್ರಮಗಳ ಬಗ್ಗೆ ಮಾರ್ಗಸೂಚಿಗಳನ್ನು ನೀಡಲಾಗಿರುತ್ತದೆ. ಸದರಿ ಮಾರ್ಗಸೂಚಿಯನ್ವಯ ಕೋವಿಡ್-19 ಸಾಂಕ್ರಾಮಿಕ ರೋಗ ತಡೆಗಾಗಿ ವಸತಿ ಕಟ್ಟಡಗಳು, ಸಾರ್ವಜನಿಕ ಸ್ಥಳಗಳು, ಮುಂತಾದ ಕಡೆಯಲ್ಲಿ ಉಗುಳುವುದನ್ನು ಕಡ್ಡಾಯವಾಗಿ ನಿರ್ಬಂಧಿಸಲು ಸೂಚಿಸಲಾಗಿರುತ್ತದೆ.

ಚಿತ್ರದುರ್ಗ ಜಿಲ್ಲಾ ವ್ಯಾಪ್ತಿಯಲ್ಲಿ ಕೋವಿಡ್-19 ರೋಗ ತಡೆ ಹಾಗೂ ನಿಯಂತ್ರಣ ಕಾರ್ಯದ ನಿಮಿತ್ತ ವಸತಿ ಸಮುಚ್ಚಯಗಳು, ಆಸ್ಪತ್ರೆ ಕಟ್ಟಡಗಳು, ಬಸ್ ಹಾಗೂ ರೈಲ್ವೇ ನಿಲ್ದಾಣಗಳು, ಹೋಟೆಲ್‌ಗಳು, ಸರ್ಕಾರಿ ಕಚೇರಿಗಳು, ನ್ಯಾಯಾಲಯ ಕಟ್ಟಡಗಳು, ಶಿಕ್ಷಣ ಕಟ್ಟಡಗಳು, ಗ್ರಂಥಾಲಯಗಳು, ಸಾರ್ವಜನಿಕ ಉದ್ಯಾನವನಗಳು ಸೇರಿದಂತೆ ಸಾರ್ವಜನಿಕರಿಂದ ಹೆಚ್ಚಾಗಿ ಬಳಸಲ್ಪಡುವ ಎಲ್ಲಾ ಸ್ಥಳಗಳಲ್ಲಿ ಉಗುಳುವುದನ್ನು ನಿರ್ಬಂಧಿಸಿ ಆದೇಶಿಸುವುದು ಸೂಕ್ತವಾಗಿರುವುದರಿಂದ ಈ ಕೆಳಗಿನಂತೆ ಆದೇಶ.

## :: ಆದೇಶ ::

**ಸಂ:ವಿಪತ್ತು ನಿರ್ವಹಣೆ:ಕೋವಿಡ್-19:ಸಿಆರ್-1/2020-21** **ದಿನಾಂಕ:15-04-2020**

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ ಶ್ರೀಮತಿ ಆರ್.ವಿನೋತ್‌ಪ್ರಿಯಾ, ಭಾ.ಆ.ಸೇ, ಆದ ನಾನು ತಕ್ಷಣದಿಂದಲೇ ಜಾರಿಗೆ ಬರುವಂತೆ ಚಿತ್ರದುರ್ಗ ಜಿಲ್ಲಾ ವ್ಯಾಪ್ತಿಯಲ್ಲಿ ವಸತಿ ಸಮುಚ್ಚಯಗಳು, ಆಸ್ಪತ್ರೆ ಕಟ್ಟಡಗಳು, ಬಸ್ ಹಾಗೂ ರೈಲ್ವೇ ನಿಲ್ದಾಣಗಳು, ಹೋಟೆಲ್‌ಗಳು, ಸರ್ಕಾರಿ ಕಚೇರಿಗಳು, ನ್ಯಾಯಾಲಯ ಕಟ್ಟಡಗಳು, ಶಿಕ್ಷಣ ಕಟ್ಟಡಗಳು, ಗ್ರಂಥಾಲಯಗಳು, ಸಾರ್ವಜನಿಕ ಉದ್ಯಾನವನಗಳು ಸೇರಿದಂತೆ ಸಾರ್ವಜನಿಕರಿಂದ ಹೆಚ್ಚಾಗಿ ಬಳಸಲ್ಪಡುವ ಎಲ್ಲಾ ಸ್ಥಳಗಳಲ್ಲಿ ಉಗುಳುವುದನ್ನು ನಿರ್ಬಂಧಿಸಿ ಆದೇಶಿಸಿರುತ್ತೇನೆ. ಈ ಆದೇಶವನ್ನು ಉಲ್ಲಂಘಿಸುವವರ ವಿರುದ್ಧ ಗರಿಷ್ಠ ರೂ.1,000/- ವರೆಗೆ ಜುಲ್ಮಾನೆಯನ್ನು ಹಾಗೂ ಕಾನೂನು ರೀತ್ಯ ಸೂಕ್ತ ಶಿಸ್ತು ಕ್ರಮಗಳನ್ನು ಜರುಗಿಸಲಾಗುವುದು.

ಜಿಲ್ಲಾಧಿಕಾರಿಗಳು
ಚಿತ್ರದುರ್ಗ ಜಿಲ್ಲೆ

**ಪ್ರತಿಯನ್ನು:-**

1) ಜಿಲ್ಲಾ ಪೊಲೀಸ್ ಅಧೀಕ್ಷಕರು, ಚಿತ್ರದುರ್ಗ ಜಿಲ್ಲೆ
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಚಿತ್ರದುರ್ಗ
3) ಜಿಲ್ಲೆಯ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ

Scanned by CamScanner